ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ರಾಷ್ಟ್ರೀಯ ಹೆದ್ದಾರಿ 169ರ ಬಗ್ಗೆ

ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :-

595 (640) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಷ್ಟ್ರೀಯ ಹೆದ್ದಾರಿ 169ರ ಮಂಗಳೂರಿನಿಂದ ಮೂಡಬಿದ್ರೆ ರಸ್ತೆಯಲ್ಲಿ ಪ್ರತಿ ನಿತ್ಯ ಅಪಘಾತಗಳು ಸಂಭವಿಸುತ್ತಿದ್ದು, 15 ವರ್ಷಗಳಿಂದ ರಸ್ತೆ ಕಾಮಗಾರಿ ನಡೆಯದೇ ಇರುವುದರಿಂದ ಜನ ಆಕ್ರೋಶಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಹೆದ್ದಾರಿ ಕಾಮಗಾರಿ ಪ್ರಾರಂಭಗೊಳ್ಳುವುದು ಯಾವಾಗ; ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಹೆದ್ದಾರಿ ವಿಸ್ತರಣೆಗೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ ; ರಸ್ತೆಗೆ ಹೋಗುವ ಭೂಮಿಯನ್ನು ಗುರುತಿಸಲಾಗಿದೆಯೇ; (ವಿವರ ನೀಡುವುದು)

(ಇ) ಹೆದ್ದಾರಿ 169 ಪೂರ್ಣಗೊಂಡು ವಾಹನ ಸಂಚಾರಕ್ಕೆ ಬಿಡುಗಡೆ ಮಾಡುವುದು ಯಾವಾಗ ; ಇದಕ್ಕೆ ತಗಲುವ ಸಮಯ ಎಷ್ಟು; (ವಿವರ ನೀಡುವುದು)

(ಈ) ಭೂ ಸ್ವಾಧೀನಗೊಳಿಸಲು ಸರ್ಕಾರಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು ? (ಸಂಪೂರ್ಣ ವಿವರ ನೀಡುವುದು)